ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 09–12–2020

# ಮಾಧ್ಯಮ ಆಮಂತ್ರಣ

## Virtual Event, EMPRI

**Centre for Climate Change, EMPRI is organising International Virtual Conference on Biodiversity & Ecosystem Services (IVC-BES, 2020) on 10-11 December, 2020 at EMPRI between 10.00 a.m -5.30 p.m. Link for the meeting is given here: https://meet.google.com/sgt-uybi-usd**

## Inauguration :

## Book Release and Presidential Address :

**Anand Singh, Minister for Forest, Environment and Ecology, Govt of Karnataka**

**Welcome Address**

**Raj Kishore Singh, IFS.,**

**Principal Chief Conservator of Forest, Development and Director General EMPRI**

**Keynote Address :**

**Prof. Klaus von Gadow**

**Georg-August University, Gottingen/Germany**

**Address by Chief Guests :**

**Dr. Akhilesh Gupta,**

**Advisor and Head, SPLICE, DST, Govt of India**

**Date : 10-12-2020 and 11-12-2020**

2) ಕರ್ನಾಟಕ ಬ್ಯಾರಿ ಸಾಹಿತ್ಯ ಅಕಾಡೆಮಿಯ 2018, 2019 ಮತ್ತು 2020 ನೇ ಸಾಲಿನ ಗೌರವ ಪ್ರಶಸ್ತಿ, ಪುರಸ್ಕಾರ ಪ್ರದಾನ ಮತ್ತು
"ಪದ್ಮಶ್ರೀ" ಹರೇಕಳ ಹಾಜಬ್ಬರಿಗೆ ಅಭಿನಂದನಾ ಸಮಾರಂಭ :

ಪ್ರಶಸ್ತಿ ಪ್ರದಾನ : ಗೋವಿಂದ ಕಾರಜೋಳ, ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಸಚಿವರು

ಗೌರವ ಪುರಸ್ಕಾರ ಪ್ರದಾನ :
ಕೋಟ ಶ್ರೀನಿವಾಸ ಪೂಜಾರಿ, ಒಳನಾಡು, ಬಂದರು, ಜಲಸಾರಿಗೆ ಮತ್ತು ಮೀನುಗಾರಿಕೆ ಸಚಿವರು

ದಿನಾಂಕ : 10–12–2020, ಗುರುವಾರ, ಸಮಯ: ಮಧ್ಯಾಹ್ನ 3–00 ರಿಂದ ರಾತ್ರಿ 9–00 ಗಂಟೆವರೆಗೆ
ಸ್ಥಳ : ರವೀಂದ್ರ ಕಲಾಕ್ಷೇತ್ರ, ಜೆ.ಸಿ.ರಸ್ತೆ, ಬೆಂಗಳೂರು

## ಪತ್ರಿಕಾ ಪ್ರಕಟಣೆ

### *ಶಾಲಾರಂಭ: ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ನಿರ್ಧಾರ- ಸುರೇಶ್ ಕುಮಾರ್*

ಬೆಂಗಳೂರು: ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ಸುರಕ್ಷತಾ ಕ್ರಮಗಳೊಂದಿಗೆ ಶಾಲಾರಂಭ ಹಾಗೂ ಮಕ್ಕಳ ಕಲಿಕಾ ಪ್ರಕ್ರಿಯೆ ಆರಂಭಿಸುವ ಕುರಿತು ಶೀಘ್ರದಲ್ಲೇ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆ ಕರೆದು ನಿರ್ಧಾರಕ್ಕೆ ಬರಲಾಗುವುದು ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ತಿಳಿಸಿದ್ದಾರೆ.

ಬುಧವಾರ ವಿಧಾನಸೌಧದಲ್ಲಿ ಖಾಸಗಿ ಅನುದಾನ ರಹಿತ ಪದವಿ ಪೂರ್ವ ಕಾಲೇಜು ಆಡಳಿತ ಮಂಡಳಿಗಳ ಒಕ್ಕೂಟದ ಪ್ರತಿನಿಧಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಎಸ್ಎಸ್ಎಲ್ಸಿ ಮತ್ತು ದ್ವಿತೀಯ

ಪಿಯುಸಿ ತರಗತಿಗಳನ್ನು ಆರಂಭಿಸುವ ಕುರಿತು ಆರೋಗ್ಯ ಇಲಾಖೆಯ ತಜ್ಞ ಸಮಿತಿಯೊಂದಿಗೂ ಚರ್ಚಿಸಿ ಸೂಕ್ತ ನಿರ್ಧಾರ ಮಾಡಲಾಗುವುದು ಎಂದರು.

ಹಲವು ರೀತಿಯಲ್ಲಿ ಮಕ್ಕಳನ್ನು ಕಲಿಕಾ ಪ್ರಕ್ರಿಯೆಯಲ್ಲಿ ತೊಡಗಿಸಲಾಗಿದೆಯಾದರೂ ಅದು ತರಗತಿ ಪಾಠಗಳಷ್ಟು ಪರಿಣಾಮಕಾರಿಯಾಗಿರುವುದಿಲ್ಲ. ಆದರೆ ಬಹು ದಿನಗಳ ಕಾಲ ಮಕ್ಕಳು ಶಾಲೆಯಿಂದ ಹೊರಗುಳಿಯುವುದರಿಂದ ಆಗುತ್ತಿರುವ ಸಾಮಾಜಿಕ ಸಮಸ್ಯೆಗಳ ಹಿನ್ನೆಲೆಯಲ್ಲಿ ಸುರಕ್ಷತಾ ಕ್ರಮಗಳೊಂದಿಗೆ ಶಾಲೆಗಳನ್ನು ಆರಂಭಿಸುವುದು ಉಚಿತವೆಂದು ಇತ್ತೀಚೆಗೆ ವಿಧಾನಪರಿಷತ್ತಿನ ಪದವೀಧರ ಮತ್ತು ಶಿಕ್ಷಕ ಕ್ಷೇತ್ರದ ಸದಸ್ಯರು ಅಭಿಪ್ರಾಯಪಟ್ಟಿದ್ದಾರೆ. ಮಕ್ಕಳು ಬಹುಕಾಲ ಶಾಲೆಯಿಂದ ಹೊರಗುಳಿಯುವುದರಿಂದ ಸಮಾಜದ ಮೇಲೆ ಆಗಿರುವ ಪರಿಣಾಮಗಳು ಸರ್ಕಾರದ ಗಮನಕ್ಕೂ ಬಂದಿದೆ. ಮಕ್ಕಳ ಭವಿಷ್ಯವೂ ಇದರಲ್ಲಿ ಅಡಗಿರುವುದರಿಂದ ಬಹುಕಾಲ ಮಕ್ಕಳನ್ನು ಶಾಲೆಯಿಂದ ಹೊರಗಿಡುವುದು ಸರಿಯಲ್ಲವಾದ್ದರಿಂದ ಮೇಲಿನ ತರಗತಿಗಳ ವಿದ್ಯಾರ್ಥಿಗಳ ಭವಿಷ್ಯದ ದೃಷ್ಟಿಯಿಂದ ಸುರಕ್ಷತಾ ಕ್ರಮಗಳೊಂದಿಗೆ ತರಗತಿಗಳನ್ನು ಆರಂಭಿಸಲು ಸರ್ಕಾರ ಸೂಕ್ತ ಚರ್ಚೆಯ ನಂತರ ನಿರ್ಣಯಕ್ಕೆ ಬರಲಿದೆ ಎಂದು ಸಚಿವರು ಹೇಳಿದರು.

ವಿದ್ಯಾರ್ಥಿಗಳ ಸುರಕ್ಷತೆ ಮತ್ತು ಭವಿಷ್ಯದ ಕುರಿತು ಸರ್ಕಾರ ಯಾವುದೇ ರೀತಿಯಲ್ಲೂ, ಯಾವುದೇ ಸಂದರ್ಭದಲ್ಲೂ ರಾಜಿಗೆ ಮುಂದಾಗದು. ಕೊರೋನಾ ಸೃಷ್ಟಿಸಿದ ವಿಷಮ ಪರಿಸ್ಥಿತಿಯಿಂದಾಗಿ ಸರ್ಕಾರದ ಇದುವರೆಗೂ ಖಚಿತ ತೀರ್ಮಾನ ತೆಗೆದುಕೊಳ್ಳಲಾಗಿಲ್ಲ ಎಂದು ಅವರು ಹೇಳಿದರು.

ಶಾಲಾ-ಕಾಲೇಜುಗಳು ಆರಂಭವಾಗದೇ ಇರುವುದರಿಂದ ಪೋಷಕರ ಕಳವಳ, ಮುಂದಿನ ವ್ಯಾಸಂಗಕ್ಕಾಗಿ ರಾಷ್ಟ್ರಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಭಾಗವಹಿಸಬೇಕಾದ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳ ಭವಿಷ್ಯ ಕುರಿತ ವಿಚಾರಗಳು ಸರ್ಕಾರದ ಗಮನದಲ್ಲಿವೆ. ಈ ಎಲ್ಲ ವಿಷಯಗಳನ್ನು ಗಮನದಲ್ಲಿಟ್ಟುಕೊಂಡು ನಿರ್ಣಯ ಕೈಗೊಳ್ಳಲಾಗುವುದು ಎಂದು ಸುರೇಶ್ ಕುಮಾರ್ ಹೇಳಿದರು.

ಉನ್ನತ ಶಿಕ್ಷಣ ಸಚಿವರೂ ಆದ ಉಪಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥ್ ನಾರಾಯಣ್ ಮಾತನಾಡಿ, ಕೋವಿಡ್ ಹಿನ್ನೆಲೆಯಲ್ಲಿ ಯಾವುದೇ ರಾಜ್ಯದಲ್ಲೂ ಶಾಲೆಗಳು ಪೂರ್ಣ ಪ್ರಮಾಣದಲ್ಲಿ ಆರಂಭಗೊಂಡಿಲ್ಲ. ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಟಿಯಿಂದ ಉನ್ನತ ಶಿಕ್ಷಣ ಹಾಗೂ ವಿಶ್ವವಿದ್ಯಾನಿಲಯಗಳ ತರಗತಿಗಳನ್ನು ಆರಂಭಿಸಲಾಗಿದೆ. ಶಾಲಾ ಶಿಕ್ಷಣ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸುರಕ್ಷತಾ ಕ್ರಮಗಳೊಂದಿಗೆ ಶಾಲೆಗಳನ್ನು ಆರಂಭಿಸಲು ಶೀಘ್ರದಲ್ಲೇ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಒಂದು ನಿರ್ಧಾರಕ್ಕೆ ಬರಲಾಗುವುದು ಎಂದರು.

ವಿಧಾನಪರಿಷತ್ ಸದಸ್ಯ ಅರುಣ್ ಶಹಾಪುರ ಶಾಲೆಗಳು ಸಕಾಲದಲ್ಲಿ ಆರಂಭವಾಗದೇ ಇರುವುದರಿಂದ ಮಕ್ಕಳಿಗೆ ಆಗಿರುವ ತೊಂದರೆಗಳು ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಇದರಿಂದಾಗಿರುವ ಸಮಸ್ಯೆಗಳನ್ನು ಯನ್ನು ಸಭೆಯ ಗಮನಕ್ಕೆ ತಂದರು.

ಖಾಸಗಿ ಅನುದಾನ ರಹಿತ ಪದವಿ ಪೂರ್ವ ಕಾಲೇಜು ಆಡಳಿತ ಮಂಡಳಿಗಳ ಒಕ್ಕೂಟದ ಅಧ್ಯಕ್ಷ ಹಾಗೂ ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷ ಡಾ. ಎಂ. ಮೋಹನ್ ಆಳ್ವ, ಮಂಗಳೂರಿನ ಶಾರದಾ ವಿದ್ಯಾಸಂಸ್ಥೆ ಅಧ್ಯಕ್ಷ ಪ್ರೊ. ಎಂ. ಬಿ. ಪುರಾಣಿಕ್, ಎಕ್ಸ್‌ಪರ್ಟ್ ವಿದ್ಯಾಸಂಸ್ಥೆ ಅಧ್ಯಕ್ಷ ಪ್ರೊ. ನರೇಂದ್ರ ನಾಯಕ್, ಶಕ್ತಿ ಶಿಕ್ಷಣ ಸಂಸ್ಥೆ ಆಡಳಿತಾಧಿಕಾರಿ ಕೆ.ಸಿ. ನಾಯಕ್, ದಾವಣಗೆರೆ ವಿಶ್ವೇಶ್ವರಯ್ಯ ಶಿಕ್ಷಣ ಸಂಸ್ಥೆ ಅಧ್ಯಕ್ಷ ಶ್ರೀಧರ, ಕಲ್ಲಡ್ಕ ಶ್ರೀರಾಮ ವಿದ್ಯಾಮಂದಿರದ ಸಂಚಾಲಕ ವಸಂತ ಮಾಧವ, ಹೆಬ್ರಿ ಎಸ್.ಆರ್. ಪಿಯು ಕಾಲೇಜು ಸಂಸ್ಥೆಯ ಅಧ್ಯಕ್ಷ ನಾಗರಾಜಶೆಟ್ಟಿ ಸೇರಿದಂತೆ ರಾಜ್ಯದ ವಿವಿಧ ಭಾಗಗಳ 20ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿ, ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಟಿಯಿಂದ ವಿಶೇಷವಾಗಿ ಪದವಿ ಪೂರ್ವ ತರಗತಿಗಳನ್ನು ಆರಂಭಿಸಬೇಕಾದ ಅನಿವಾರ್ಯತೆಯನ್ನು ಮತ್ತು ಶಾಲೆಗಳ ಬಂದ್‌ನಿಂದಾಗಿ ಉದ್ಭವಿಸಿರುವ ಗ್ರಾಮೀಣ ಪ್ರದೇಶದ ಪರಿಸ್ಥಿತಿ ಹಾಗೂ ಸಾಮಾಜಿಕ ಮತ್ತು ಆರ್ಥಿಕ ಸಮಸ್ಯೆಗಳನ್ನು ಸಭೆಯ ಮುಂದೆ ಎಳೆಎಳೆಯಾಗಿ ವಿವರಿಸಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆ ನಿರ್ದೇಶಕಿ ಸ್ನೇಹಲ್ ಸೇರಿದಂತೆ ಶಿಕ್ಷಣ ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು.

## "ಹವಾಮಾನ ಬದಲಾವಣೆಯಲ್ಲಿ ಜೀವ ವೈವಿಧ್ಯ ಮತ್ತು ಪರಿಸರ ವ್ಯವಸ್ಥೆಯ ಸೇವೆಗಳು" ಕುರಿತು ವಿಚಾರ ಸಂಕಿರಣ

**ಬೆಂಗಳೂರು, ಡಿಸೆಂಬರ್ 09 (ಕರ್ನಾಟಕ ವಾರ್ತೆ) :**

ದಿನಾಂಕ 10-12-2020 ಹಾಗೂ 11-12-2020 ರಂದು ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ (ಎಂಪ್ರಿ ) ಅಂತಾರಾಷ್ಟ್ರೀಯ ಆನ್‌ಲೈನ್ ವಿಚಾರ ಸಂಕಿರಣ "ಹವಾಮಾನ ಬದಲಾವಣೆಯಲ್ಲಿ ಜೀವ ವೈವಿಧ್ಯ ಮತ್ತು ಪರಿಸರ ವ್ಯವಸ್ಥೆಯ ಸೇವೆಗಳು" ಏರ್ಪಡಿಸಿದೆ. ಅರಣ್ಯ ಸಚಿವ ಆನಂದ್‌ಸಿಂಗ್ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದರೆ. ಈ ಸಂಕಿರಣದಲ್ಲಿ 64 ಸಂಶೋಧನಾ ಪ್ರಬಂಧಗಳನ್ನು ಪ್ರಸ್ತುತಪಡಿಸಲಾಗುತ್ತದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## <u>ಸಚಿವರ ಪ್ರವಾಸ</u>

**ಬೆಂಗಳೂರು, ಡಿಸೆಂಬರ್ 09 (ಕರ್ನಾಟಕ ವಾರ್ತೆ) :**

ನಗರಾಭಿವೃದ್ಧಿ ಹಾಗೂ ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವ ಬಿ. ಎ. ಬಸವರಾಜ ಅವರು ಡಿಸೆಂಬರ್ 10 ಮತ್ತು 11 ರಂದು ದಾವಣಗೆರೆ, ಚಿತ್ರದುರ್ಗ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಡಿಸೆಂಬರ್ 11 ರಂದೇ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಅರ್ಜಿ ಆಹ್ವಾನ

ಬೆಂಗಳೂರು, ಡಿಸೆಂಬರ್ 09 (ಕರ್ನಾಟಕ ವಾರ್ತೆ) :

2020-21 ನೇ ಸಾಲಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆವತಿಯಿಂದ ವೃತ್ತಿರಂಗಭೂಮಿ ಕಾಯಕಲ್ಪ ಯೋಜನೆಯಡಿ ಧನಸಹಾಯಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಕನಿಷ್ಠ 5 ವರ್ಷಗಳ ನೋಂದಾಯಿತ ವೃತ್ತಿ ನಾಟಕ ಕಂಪನಿಗಳು ಇಲಾಖೆಯಿಂದ ನಿಗದಿಪಡಿಸಿರುವ ಅರ್ಜಿ ನಮೂನೆಯೊಂದಿಗೆ ಅಗತ್ಯ ದಾಖಲೆಗಳನ್ನು ಲಗತ್ತಿಸಿ ಡಿಸೆಂಬರ್ 20 ಸಂಜೆ 5-30 ರೊಳಗೆ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು ಇವರಿಗೆ ಅರ್ಜಿ ಸಲ್ಲಿಸಲು ಕೋರಲಾಗಿದೆ. ಅರ್ಜಿಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವೆಬ್‌ಸೈಟ್ www.kannadasiri.karnataka.gov.in ನಿಂದ ಪಡೆಯಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಫಲಿತಾಂಶ ಪ್ರಕಟ

ಬೆಂಗಳೂರು, ಡಿಸೆಂಬರ್ 09 (ಕರ್ನಾಟಕ ವಾರ್ತೆ) :

2020 ನೇ ಸಾಲಿಗೆ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳ ಫಲಿತಾಂಶವನ್ನು ದಿನಾಂಕ 6-11-2020 ರಂದು ಪ್ರಕಟಿಸಲಾಗಿದೆ. ವಿವರಣಾತ್ಮಕ ಉತ್ತರ ಪತ್ರಿಕೆಗಳ ಅಂಕಗಳ ಮರು ಎಣಿಕೆಗೆ 30 ದಿನಗಳೊಳಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ತಿಳಿಸಲಾಗಿತ್ತು. ತಾಂತ್ರಿಕ ಕಾರಣದಿಂದ ಆನ್‌ಲೈನ್ ನಲ್ಲಿ ತಂತ್ರಾಂಶವನ್ನು ಅಳವಡಿಸುವುದು ವಿಳಂಬವಾದ ಪ್ರಯುಕ್ತ ಅನುತ್ತೀರ್ಣರಾದ ಅಭ್ಯರ್ಥಿಗಳು ವಿವರಣಾತ್ಮಕ ವಿಷಯಗಳ ಮರು ಎಣಿಕೆಗೆ ಅರ್ಜಿ ಸಲ್ಲಿಸಲು ಇಚ್ಛಿಸಿದಲ್ಲಿ ಮಾತ್ರ ಪ್ರತಿ ವಿಷಯಕ್ಕೆ ರೂ. 100 ಶುಲ್ಕದೊಂದಿಗೆ ಆನ್‌ಲೈನ್ ಮೂಲಕ ಮಾತ್ರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 31-12-2020 ರವರೆಗೆ ವಿಸ್ತರಿಸಿದೆ. ಅಭ್ಯರ್ಥಿಗಳು ವೆಬ್‌ಸೈಟ್ http://kpsc.kar.nic ನಿಂದ ವಿವರಣಾತ್ಮಕ ಪತ್ರಿಕೆಗಳ ಅಂಕಗಳ ಮರುಎಣಿಕೆಗೆ ಅರ್ಜಿ ಸಲ್ಲಿಸಬಹುದಾಗಿದೆ.

ಈಗಾಗಲೇ ಆಫ್‌ಲೈನ್ ಮೂಲಕ ಅಂಕಗಳ ಮರು ಎಣಿಕೆಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ. ಅಂತಹ ಅಭ್ಯರ್ಥಿಗಳು ಮತ್ತೊಮ್ಮೆ ಆನ್‌ಲೈನ್ ಮೂಲಕ ಅಂಕಗಳ ಮರು ಎಣಿಕೆಗೆ ನಿಗದಿತ ಶುಲ್ಕದೊಂದಿಗೆ ಮನವಿ ಸಲ್ಲಿಸಿದ್ದಲ್ಲಿ ಮಾತ್ರ ಅಂತಹ ಮನವಿಗಳನ್ನು ಪರಿಗಣಿಸಲಾಗುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಪರೀಕ್ಷೆ ಮುಂದೂಡಿಕೆ

ಬೆಂಗಳೂರು, ಡಿಸೆಂಬರ್ 09 (ಕರ್ನಾಟಕ ವಾರ್ತೆ) :

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಕೆ.ಎಸ್.ಕ್ಯು.ಎ.ಎ.ಸಿ ವತಿಯಿಂದ 2020–21ನೇ ಸಾಲಿನ NTS-NMMS ಪರೀಕ್ಷೆಗಳನ್ನು ದಿನಾಂಕ: 24.01.2021 ರಂದು ನಡೆಸುವುದಾಗಿ ತಿಳಿಸಲಾಗಿತ್ತು. ಆದರೆ ಅದೇ ದಿನಾಂಕದಂದು ಕೆ.ಪಿ.ಎಸ್.ಸಿ ವತಿಯಿಂದ ವಿವಿಧ ಹುದ್ದೆಗಳ ನೇಮಕಾತಿಗಾಗಿ ಸ್ಪರ್ಧಾತ್ಮಕ ಪರೀಕ್ಷೆಗಳು ನಡೆಯುತ್ತಿರುವುದರಿಂದ NTS-NMMS ಪರೀಕ್ಷೆಗಳನ್ನು ದಿನಾಂಕ:25.01.2021 ಕ್ಕೆ ಮುಂದೂಡಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಕೆ.ಪಿ.ಎಸ್.ಸಿ– ಎಸ್.ಎಂ.ಎಸ್. ಸಂದೇಶ

ಬೆಂಗಳೂರು, ಡಿಸೆಂಬರ್ 09 (ಕರ್ನಾಟಕ ವಾರ್ತೆ) :

Please visit KPSC Website "http://kpsc.kar.nic.in" & link your Digilocker Account to your Aadhaar Number for downloading Certificate of Departmental Examination- 2020/1st Session. Login with your Registration Number (7 digits) as Username and your PAN Card Number as password.

2020ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಯ ಉತ್ತೀರ್ಣತಾ ಪ್ರಮಾಣ ಪತ್ರಗಳನ್ನು ಆಯೋಗದ ವೆಬ್‌ಸೈಟ್ "**http://kpsc.kar.nic.in**" ಮುಖಾಂತರ ಡಿಜಿಲಾಕರ್ ಅಕೌಂಟ್‌ನೊಂದಿಗೆ ಆಧಾರ್ ಸಂಖ್ಯೆಯನ್ನು ಜೋಡಿಸಿ ನಂತರ ನಿಮ್ಮ ನೋಂದಣಿ ಸಂಖ್ಯೆ (7 ಅಂಕಿಗಳು) ಯನ್ನು **Username** ಆಗಿ ಮತ್ತು ಪಾನ್‌ಕಾರ್ಡ್ ನಂಬರನ್ನು ಪಾಸ್‌ವರ್ಡ್ ಆಗಿ ಉಪಯೋಗಿಸಿ ಪ್ರಮಾಣಪತ್ರಗಳನ್ನು ಪಡೆಯಬಹುದು.

## ದತ್ತು ಸ್ವೀಕಾರ

ಬೆಂಗಳೂರು, ಡಿಸೆಂಬರ್ 09 (ಕರ್ನಾಟಕ ವಾರ್ತೆ) :

**ಮೈಸೂರು ಮೃಗಾಲಯದ ಪ್ರಾಣಿಗಳ ದತ್ತು ಸ್ವೀಕಾರ ಯೋಜನೆ ಅಡಿಯಲ್ಲಿ ಪ್ರಮೋದ್ ಶ್ರೀವತ್ಸ್, ಬೆಂಗಳೂರು, ಗೋಲ್ಡನ್ ಜಕಲ್, ಉಪೇಂದ್ರ ಬಾಪಟ್ ಮತ್ತು ಮ್ರಿಸುಲ ಡೋಂಗ್ರೆ ಶಿವಮೊಗ್ಗ ಬ್ಲ್ಯಾಕ್ ಬಕ್ ಮತ್ತು ಹಿಮಾಲಯನ್ ಗೋರಲ್, ಲೀಲಾ ಕೃಷ್ಣನ್, ಬೆಂಗಳೂರು ಮೌಸ್ ಡೀರ್ ಪ್ರಾಣಿಪಕ್ಷಿಗಳನ್ನು ದತ್ತು ಸ್ವೀಕಾರ ಮಾಡಿದ್ದಾರೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

## ವಿವಿಧ ವರದಿಗಳ ಮಂಡನೆ

**ಬೆಂಗಳೂರು, 09ನೇ ಡಿಸೆಂಬರ್ 2020(ಕರ್ನಾಟಕ ವಾರ್ತೆ):**

**ಇಂದು ವಿಧಾನಸಭೆಯ ಅಧಿವೇಶನದಲ್ಲಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಮಾರ್ಚ್ 2019ಕ್ಕೆ ಕೊನೆಗೊಂಡ ವರ್ಷದ ಸಾಮಾನ್ಯ ಮತ್ತು ಸಾಮಾಜಿಕ ವಲಯದ ವರದಿಯನ್ನು (2020ನೇ ವರ್ಷದ ವರದಿ ಸಂಖ್ಯೆ-3) ವಿಧಾನ ಸಭೆಯಲ್ಲಿ ಮಂಡಿಸಿದರು.**

**ಈ ವರದಿಯು ರಾಜ್ಯದಲ್ಲಿನ 65 ಇಲಾಖೆಗಳು ಮತ್ತು 11 ಸ್ವಾಯತ್ತ ಸಂಸ್ಥೆಗಳು ಸಾಮಾನ್ಯ ಮತ್ತು ಸಾಮಾಜಿಕ ವಲಯ ಸೇವೆಗಳಡಿಯಲ್ಲಿ ಭರಿಸಿದ ವೆಚ್ಚವನ್ನು ಪ್ರಧಾನ ಮಹಾಲೇಖಪಾಲಕರು (ಲೆಕ್ಕಪರಿಶೋಧನೆ-1), ಬೆಂಗಳೂರು ಇವರು ಲೆಕ್ಕಪರಿಶೋಧನೆ ನಡೆಸಿದ ಕುರಿತಾಗಿದೆ. ಆರೋಗ್ಯ ಕವಚ-ಯೋಜನೆ 108ರ ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ ಮತ್ತು ವಿವಿಧ ಇಲಾಖೆಗಳ ಅನುಪಾಲನಾ ಲೆಕ್ಕಪರಿಶೋಧನೆಯಲ್ಲಿ ಕಂಡುಬಂದ ಪ್ರಮುಖ ಫಲಿತಾಂಶಗಳನ್ನು ಹೊರತರುತ್ತದೆ.**

**ಇದೇ ಸಂದರ್ಭದಲ್ಲಿ ಜಂಟಿ ಪರಿಶೀಲನಾ ಸಮಿತಿಯ ಅಧ್ಯಕ್ಷರಾದ ಎಸ್. ರಘು ಅವರು 2020ನೇ ಸಾಲಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಿಧೇಯಕವನ್ನು ಪರಿಶೀಲಿಸಲು ರಚಿಸಲಾಗಿರುವ ಜಂಟಿ ಪರಿಶೀಲನಾ ಸಮಿತಿಯ ವರದಿಯನ್ನು ಒಪ್ಪಿಸಿದರು.**

**ಅಧೀನ ಶಾಸನ ರಚನಾ ಸಮಿತಿಯ ಅಧ್ಯಕ್ಷರಾದ ಎಸ್. ಕುಮಾರ್ ಬಂಗಾರಪ್ಪ ಅವರು 2019-20 ಮತ್ತು 2020-21ನೇ ಸಾಲಿನ ಕರ್ನಾಟಕ ವಿಧಾನಮಂಡಲದ ಅಧೀನ ಶಾಸನ ರಚನಾ ಸಮಿತಿಯ 49ನೇ ವರದಿಯನ್ನು ವಿಧಾನ ಸಭೆಯಲ್ಲಿ ಒಪ್ಪಿಸಿದರು.**

## ವಿಧೇಯಕಗಳ ಮಂಡನೆ

ಬೆಂಗಳೂರು, ಡಿಸೆಂಬರ್ 09 (ಕರ್ನಾಟಕ ವಾರ್ತೆ):

2020ನೇ ಸಾಲಿನ ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಸಂಸ್ಥೆಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಕಾರ್ಮಿಕ ಮತ್ತು ಸಕ್ಕರೆ ಸಚಿವ ಅರಬೈಲ್ ಶಿವರಾಂ ಹೆಬ್ಬಾರ್ ಅವರು ಇಂದು ವಿಧಾನಸಭೆಯಲ್ಲಿ ಮಂಡಿಸಿದರು.

ಕಂದಾಯ ಸಚಿವ ಆರ್ ಅಶೋಕ ಅವರು2020ನೇ ಸಾಲಿನ ಕರ್ನಾಟಕ ಸ್ಟಾಂಪು(ಎರಡನೇ ತಿದ್ದುಪಡಿ) ವಿಧೇಯಕಗಳನ್ನು ಮಂಡಿಸಿದರು.

ಮುಂದುವರೆದು ವಿಧೇಯಕ ಕುರಿತು ಮಾತನಾಡಿ ಕರ್ನಾಟಕ ಸ್ಟಾಂಪು ಅಧಿನಿಯಮ, 1957ನ್ನು ಮತ್ತಷ್ಟು ತಿದ್ದುಪಡಿ ಮಾಡುವ ಕುರಿತಾಗಿದೆ. ರಾಜ್ಯ ಸರ್ಕಾರವು, ಸಾರ್ವಜನಿಕ ಹಿತಾಸಕ್ತಿಯಲ್ಲಿ, ಅಧಿಸೂಚನೆಯ ಮೂಲಕ, ವಿಸ್ತರಣೆ, ಆಧುನೀಕರಣ ಮತ್ತು ವೈವಿಧ್ಯೀಕರಣ ಪ್ರಾಜೆಕ್ಟಗಳನ್ನು ಒಳಗೊಂಡಂತೆ ಹೊಸದಾದ ಮತ್ತು ಅಸ್ಥಿತ್ವದಲ್ಲಿರುವ ಅತಿಸಣ್ಣ, ಸಣ್ಣ, ಮಧ್ಯಮ ಉದ್ಯಮಗಳು (MSME) ದೊಡ್ಡ, ಮೆಗಾ, ಅಲ್ಟ್ರಾ ಮೆಗಾ, ಸೂಪರ್ ಮೆಗಾ ಉದ್ಯಮಗಳು ಕಾರ್ಯಗತಗೊಳಿಸಿದ, 2020–25ರ ಕರ್ನಾಟಕ ಕೈಗಾರಿಕಾ ನೀತಿಯಲ್ಲಿ ನಿರ್ದಿಷ್ಟಪಡಿಸಿದಂತೆ ಯಾವುದೇ ಅಂಥ ಪ್ರಾಜೆಕ್ಟ್‌ಗಳ ಸಂಬಂಧದಲ್ಲಿ, ಅದರಲ್ಲಿ ನಿರ್ದಿಷ್ಟಪಡಿಸಬೇಕಾದ ಯಾವುದೇ ಲಿಖಿತಗಳ ಮೇಲೆ ಪಾವತಿಸಬೇಕಾದ ಸ್ಟಾಂಪು ಶುಲ್ಕವನ್ನು, ಕೈಗಾರಿಕೆಗಳ ಮತ್ತು ವಾಣಿಜ್ಯ ನಿರ್ದೇಕರಿಂದ, ಆ ಮಟ್ಟಿಗೆ ಪ್ರಮಾಣಪತ್ರವನ್ನು ಒದಗಿಸುವುದಕ್ಕೆ ಒಳಪಟ್ಟು, ಕಡಿಮೆಗೊಳಿಸಬಹುದು ಅಥವಾ ಮಾ ಫಿ ಮಾಡಬಹುದು. ಮಾರುಕಟ್ಟೆ ಮೌಲ್ಯವು ಇಪ್ಪತ್ತು ಲಕ್ಷಗಳು ಅಥವಾ ಇಪ್ಪತ್ತು ಲಕ್ಷ ರೂಪಾಯಿಗಳಿಗಿಂತ ಕಡಿಮೆ ಎದ್ದಲ್ಲಿ ಮೌಲ್ಯದ 2%, ಮಾರುಕಟ್ಟೆ ಮೌಲ್ಯವು ಇಪ್ಪತ್ತು ಲಕ್ಷ ರೂಪಾಯಿಗಳಿಗಿಂತ ಹೆಚ್ಚಿದ್ದು, ಆದರೆ ಮೂವತ್ತೈದು ಲಕ್ಷ ರೂಪಯಿಗಳವರೆಗೆ ಮತ್ತು ಅದನ್ನು ಒಳಗೊಂಡು ಇದ್ದಲ್ಲಿ ಮೌಲ್ಯದ 3% ರಷ್ಟಕ್ಕೆ ಇರುತ್ತದೆ ಎಂದು ಸಭೆಗೆ ತಿಳಿಸಿದರು.

ಇದೇ ಸಂದರ್ಭದಲ್ಲಿ 2020ನೇ ಸಾಲಿನ ಕರ್ನಾಟಕ ಸಂಸದೀಯ ಕಾರ್ಯದರ್ಶಿಗಳ ವೇತನ, ಭತ್ಯೆಗಳು ಮತ್ತು ಸಂಕೀರ್ಣ ಉಪಬಂಧಗಳ (ನಿರಸನಗೊಳಿಸುವ) ವಿಧೇಯಕವನ್ನು ಕಾನೂನು , ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವ ಮಾಧುಸ್ವಾಮಿ ವಿಧಾನ ಸಭೆಯಲ್ಲಿ ಮಂಡಿಸಿದರು.

ಭಾರತ ಸರ್ವೋಚ್ಚ ನ್ಯಾಯಾಲಯವು ಬಿಮೊಲಾಂಗು, ರಾಯ್ ವಿರುದ್ದ ಅಸ್ಸಾಂ ರಾಜ್ಯ (2018) 14ಎಸ್‌ಸಿಸಿ 408ರಲ್ಲಿನ ತೀರ್ಪನ್ನು ಅವಲಂಬಿಸಿ, ಭಾರತ ಸಂವಿಧಾನಕ್ಕೆ ಬಾಹಿರವಾಗಿದ್ದು (ultra vires) ಆರಂಭದಲ್ಲೇ ಅನೂರ್ಜಿತವಾಗುವುದರಿಮದ (ab-initio-

void) ಕರ್ನಾಟಕ ಸಂಸದೀಯ ಕಾರ್ಯದರ್ಶಿಗಳ ವಏತನ, ಭತ್ಯೆಗಳು ಮತ್ತು ಸಂಕೀರ್ಣ ಉಪಬಂಧಗಳ ಅಧಿನಿಯಮ, 1963ನ್ನು (1963ರ ಕರ್ನಾಟಕ ಅದೀನಿಯಮ 15) ಕರ್ನಾಟಕ ಉಚ್ಚ ನ್ಯಾಯಾಲಯವು ತೊಡೆದು ಹಾಕಿರುತ್ತದೆ.

ಆದ್ದರಿಂದ ಕರ್ನಾಟಕ ಸಂಸದೀಯ ಕಾರ್ಯದರ್ಶಿಗಳ ವೇತನ, ಭತ್ಯೆಗಳು ಮತ್ತು ಸಂಕೀಣಾ ಉಪಬಂಧಗಳ ಅಧಿನಿಯಮ, 1963 ನ್ನು (1963ರ ಕರ್ನಾಟಕ ಅಧಿನಿಯಮ 15) ನಿರಸನಗೊಳಿಸುವುದು ಅವಶ್ಯಕವೆಂದು ಪರಿಗಣಿಸಲಾದ ವಿಧೇಯಕವಾಗಿದೆ ಎಂದು ಹೇಳಿದರು.